ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015-16 ದಿನಾಂಕ: 26-04-2016

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ಪತ್ರಿಕಾಗೋಷ್ಠಿ:<br><br>ಡಾ. ಹೆಚ್. ಶಿವಣ್ಣ,<br>ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ಕುಲಪತಿ ಅವರಿಂದ ಕೃಷಿ ಇಲಾಖೆ ಸಾಧನೆಗಳು ಹಾಗೂ ಘಟಿಕೋತ್ಸವ ಕುರಿತು.<br><br>ಸೂಚನೆ: ಈ ಕಾರ್ಯಕ್ರಮಕ್ಕೆ ವಾಹನ ವ್ಯವಸ್ಥೆ ಮಾಡಲಾಗಿದ್ದು, ವಾಹನವು ಅಂದು ಬೆಳಿಗ್ಗೆ 11-45 ಗಂಟೆಗೆ ಕಬ್ಬನ್ ಉದ್ಯಾನವನದಲ್ಲಿರುವ ಪ್ರೆಸ್ ಕ್ಲಬ್ ಆವರಣದಿಂದ ತೆರಳಲಿದೆ.<br><br>ಸಂಪರ್ಕ:<br><br>ಡಾ. ಕೆ. ಶಿವರಾಮು,<br>ಪ್ರಾಧ್ಯಾಪಕರು ಹಾಗೂ ಹಿರಿಯ ವಾರ್ತಾ ತಜ್ಞರು.<br><br>ಮೊ. ಸಂಖ್ಯೆ: 9972035456 | 27-04-2016<br>ಬುಧವಾರ<br>ಮಧ್ಯಾಹ್ನ<br>12-30 ಗಂಟೆಗೆ | ಕುಲಪತಿಗಳ ಕಚೇರಿ,<br>ಕೃಷಿ ವಿಶ್ವವಿದ್ಯಾನಿಲಯ,<br>ಬೆಂಗಳೂರಿನ ಗಾಂಧಿ ಕೃಷಿ ವಿಜ್ಞಾನ ಕೇಂದ್ರ, (ಜಿ.ಕೆ.ವಿ.ಕೆ.)<br>ಹೆಬ್ಬಾಳ,<br>ಬೆಂಗಳೂರು – 560 024 |
| 2 | ಬರ ಅಧ್ಯಯನ ಮತ್ತು ಬರ ನಿರ್ವಹಣೆ ಪರಿಶೀಲನೆ: ಸಚಿವ ಸಂಪುಟ ಉಪ ಸಮಿತಿಯಿಂದ ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಕೈಗೊಂಡಿರುವ ಬರ ನಿರ್ವಹಣೆ ಪ್ರಗತಿ ಪರಿಶೀಲನೆ | 27-4-2016<br><br>ಬುಧವಾರ<br><br>ಸಂಜೆ<br><br>4-30 ಗಂಟೆಗೆ | ಕೆಂಪೇಗೌಡ ರಸ್ತೆಯಲ್ಲಿರುವ ಜಿಲ್ಲಾ ಪಂಚಾಯತಿ ಸಭಾಂಗಣ<br><br>ಬೆಂಗಳೂರು |

ನಿರ್ದೇಶಕರ ಪರವಾಗಿ

**ಪತ್ರಿಕಾ ಪ್ರಕಟಣೆ**

# ತಾಪಮಾನ ಹೆಚ್ಚಳದಿಂದ ಆರೋಗ್ಯ ಸಮಸ್ಯೆಗಳು ಉಲ್ಬಣವಾಗುವ ಸಾಧ್ಯತೆ, ಮುಂಜಾಗ್ರತೆ ವಹಿಸುವಂತೆ ಆರೋಗ್ಯ ಸಚಿವರಿಂದ ಮನವಿ

ಬೆಂಗಳೂರು, ಏಪ್ರಿಲ್ 26 (ಕರ್ನಾಟಕ ವಾರ್ತೆ)

ಪ್ರತಿಕೂಲ ಹವಮಾನದಿಂದಾಗಿ ತಾಪಮಾನವು ಹೆಚ್ಚಾಗಿದ್ದು ಆರೋಗ್ಯ ಸಂಬಂಧ ಸಮಸ್ಯೆಗಳು ಉಲಬ್ಬಣಗೊಳ್ಳುವ ಸಾಧ್ಯತೆ ಇರುವುದರಿಂದ ಸಾರ್ವಜನಿಕರು ಉತ್ತಮ ಆರೋಗ್ಯ ಕಾಪಾಡಿಕೊಳ್ಳಲು ಮುಂಜಾಗ್ರತಾಕ್ರವಹಿಸಬೇಕು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಾದ ಶ್ರೀ ಯು. ಟಿ. ಖಾದರ್ ಅವರು ಮನವಿ ಮಾಡಿದರು.

ವಿಕಾಸಸೌಧದಲ್ಲಿ ಇಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಚಿವರು ಸಾಮಾನ್ಯವಾಗಿ ಮಧ್ಯಾಹ್ನ 12 ಗಂಟೆಯಿಂದ 3 ಗಂಟೆವರೆಗೆ ಬಿಸಿಲಿನ ತಾಪಮಾನ ಹೆಚ್ಚಾಗಿರುತ್ತದೆ. ಆ ಸಮಯದಲ್ಲಿ ಬಿಸಿಲಿಗೆ ಹೋಗುವ ಸಂಭವ ಬಂದಲ್ಲಿ ಕೊಡೆ ಬಳಸಬೇಕು ಎಂದ ಸಚಿವರು ಸಡಿಲವಾದ ತೆಳು ಹತ್ತಿ ಬಟ್ಟೆ ಧರಿಸುವುದು, ಉಪ್ಪು, ಸಕ್ಕರೆ ಮಿಶ್ರಿತ ನೀರು ಸೇವನೆ, ಹಣ್ಣಿನ ರಸ ಕುಡಿಯುವುದು ಸೇರಿದಂತೆ ಮಸಾಲೆ ರಹಿತ ಶುದ್ಧ ಸಾತ್ವಿಕ ಆಹಾರ ಸೇವಿಸಬೇಕು ಎಂದು ತಿಳಿಸಿದರು.

ಬೇಸಿಗೆ ಕಾಲ ಮುಗಿಯುವರೆಗೆ ವೃದ್ದರು ಮತ್ತು ಮಕ್ಕಳ ಬಗ್ಗೆ ಹೆಚ್ಚು ಕಾಳಜಿ ವಹಿಸವ ಜೊತೆಗೆ ಚರ್ಮಕೆಂಪು ಬಣ್ಣ ಕಂಡುಬಂದಲ್ಲಿ, ಬೆವರಿನ ಪ್ರಮಾಣ ಕಡಿಮೆಯಾದಲ್ಲಿ, ದೇಹದಲ್ಲಿ ಉಷ್ಣತೆ ಜಾಸ್ತಿಯಾದರೆ ಹಾಗೂ ದೀರ್ಘವಾದ ಉಸಿರಾಟ ಕಂಡು ಬಂದಲ್ಲಿ ವೈದ್ಯರ ಬಳಿ ಸೂಕ್ತ ಚಿಕಿತ್ಸೆ ಪಡೆದುಕೊಳ್ಳಬೇಕು ಎಂದರು.

ಆರೋಗ್ಯ ಮತ್ತು ಕುಟುಂಬ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಸುಮಾರು 2012 ಅಧಿಕಾರಿ, ನೌಕರರುಗಳಿಗೆ ಬಡ್ತಿ ನೀಡಲಾಗಿದ್ದು ಈ ಪೈಕಿ 803 ಕಿರಿಯ ಮಹಿಳಾ ಸಹಾಯಕಿಯರಿಗೆ ಹಾಗೂ 610 ಕಿರಿಯ ಪುರುಷ ಸಹಾಯಕರುಗಳಿಗೆ ಹಿರಿಯ ಸಹಾಯಕರುಗಳ ಹುದ್ದೆಗೆ ಬಡ್ತಿ ನೀಡಲಾಗಿದೆ ಎಂದ ಸಚಿವರು ಉಳಿದ 1200 ವಿವಿಧ ಹಂತದ ಹುದ್ದೆಗಳಿಗೆ ಇದೇ ತಿಂಗಳ ಅಂತ್ಯದೊಳಗೆ ಮುಂಬಡ್ತಿ ನೀಡಲಾಗುವುದು ಎಂದು ಸಚಿವರು ತಿಳಿಸಿದರು.

ನಮ್ಮ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಈವರೆಗೆ 672 ತಜ್ಞ ವೈದ್ಯರು 243 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳು ಹಾಗೂ 75 ದಂತ ವೈದ್ಯಾಧಿಕಾರಿಗಳನ್ನು ನೇಮಕ ಮಾಡಲಾಗಿದೆ ಯು.ಟಿ. ಖಾದರ್ ಅವರು ಮೇ ತಿಂಗಳ ಅಂತ್ಯದೊಳಗೆ ಕರ್ನಾಟಕ ಲೋಕಸೇವಾ ಆಯೋಗವು ಕಾಯ್ದಿರಿಸಿದ ಪಟ್ಟಿಯಲ್ಲಿರುವ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡಲಾಗುವುದು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಯು.ಟಿ. ಖಾದರ್ ಅವರು ತಿಳಿಸಿದರು.

ಜಿಪಿಆರ್

## ಬೆಂಗಳೂರು ಗ್ರಾಮಾಂತರ ಜಿಲ್ಲೆ : ಬರ ಅಧ್ಯಯನ ಸಚಿವ ಸಂಪುಟ ಉಪ ಸಮಿತಿ ಸಭೆ

ಏಪ್ರಿಲ್ 26 (ಕರ್ನಾಟಕ ವಾರ್ತೆ): ಬರ ಅಧ್ಯಯನ ಮತ್ತು ಬರ ನಿರ್ವಹಣೆ ಪರಿಶೀಲನೆಗಾಗಿ ಸರ್ಕಾರದಿಂದ ರಚಿಸಲಾಗಿರುವ ಸಚಿವ ಸಂಪುಟ ಉಪ ಸಮಿತಿಯು ಏಪ್ರಿಲ್ 27 ರಂದು ಸಂಜೆ 4.30 ಗಂಟೆಗೆ ನಗರದ ಕೆಂಪೇಗೌಡ ರಸ್ತೆಯಲ್ಲಿರುವ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಸಭೆ ಸೇರಿ, ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಕೈಗೊಳ್ಳಲಾಗಿರುವ ಬರ ನಿರ್ವಹಣೆಯ ಕಾರ್ಯಕ್ರಮಗಳ ಪ್ರಗತಿ ಪರಿಶೀಲನೆ ನಡೆಸಲಿದೆ.

ಕಂದಾಯ ಸಚಿವ ಶ್ರೀನಿವಾಸಪ್ರಸಾದ್ ಅವರ ನೇತೃತ್ವದ ಸಮಿತಿಯಲ್ಲಿ ಮೂಲ ಸೌಕರ್ಯ ಅಭಿವೃದ್ಧಿ ಹಾಗೂ ವಾರ್ತಾ ಸಚಿವ ಆರ್. ರೋಷನ್‌ಬೇಗ್, ಇಂಧನ ಸಚಿವ ಡಿ.ಕೆ. ಶಿವಕುಮಾರ್, ಸಮಾಜ ಕಲ್ಯಾಣ ಸಚಿವ ಹೆಚ್. ಆಂಜನೇಯ, ಕೃಷಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಭೈರೇಗೌಡ ಅವರುಗಳಿದ್ದು, ಜಿಲ್ಲೆಯ ಬರಸ್ಥಿತಿಯನ್ನು ನಿಬಾಯಿಸಲು ಕೈಗೊಂಡಿರುವ ಕಾರ್ಯಕ್ರಮಗಳ ಪ್ರಗತಿ ಪರಿಶೀಲನೆ ನಡೆಸಲಿದ್ದಾರೆ.